ಶ್ರೀ ಪಾಟೀಲ್ ಎಸ್.ಎಸ್.(ಮುಂಡರಗಿ)126(103)

ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಕೇಂದ್ರ ಸರ್ಕಾರ ಪ್ರತಿಯೊಂದು ರಾಜ್ಯಕ್ಕೆ ಸೆಂಟ್ರಲ್ ಯೂನಿವರ್ಸಿಟಿ ಮಂಜೂರು ಮಾಡಲು ತೀರ್ಮಾನಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಕರ್ನಾಟಕ ಯೂನಿವರ್ಸಿಟಿ ಧಾರವಾಡ ಇದನ್ನು ಸೆಂಟ್ರಲ್ ಯೂನಿವರ್ಸಿಟಿಯೆಂದು ಮಾಡಲಾಗುವುದೇ?

ಶ್ರೀ ಡಿ.ಹೆಚ್.ಶಂಕರಮೂರ್ತಿ

ಅ) ಈ ಬಗ್ಗೆ ಕೇಂದ್ರ ಸರ್ಕಾರದಿಂದ ಮಾಹಿತಿ ಸ್ವೀಕೃತವಾಗಿಲ್ಲ.

ಆ) ಉದ್ಭವಿಸುವುದಿಲ್ಲ.

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ)127(110)

ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಬೆಳ್ತಂಗಡಿ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಹಲವಾರು ಗ್ರಾಮ ಪಂಚಾಯತ್ಗಳಿಗೆ ಖಾಯಂ ಕಾರ್ಯದರ್ಶಿಗಳ ನೇಮಕವಾಗಿಲ್ಲವಾದ ಕಾರಣ ಗ್ರಾಮ ಪಂಚಾಯತ್ ಕಾರ್ಯನಿರ್ವಹಣೆಗೆ ಅನಾನುಕೂಲವಾಗಿರುವ ಬಗ್ಗೆ ಸರ್ಕಾರದ ಕ್ರಮಗಳೇನು;

ಆ) ಖಾಯಂ ಕಾರ್ಯದರ್ಶಿಗಳ ಕೊರತೆಯಿಂದಾಗಿ ಇರುವ ಒಬ್ಬ ಕಾರ್ಯದರ್ಶಿ ಹಲವಾರು ಗ್ರಾಮ ಪಂಚಾಯತ್ಗಳಲ್ಲಿ ಕರ್ತವ್ಯ